ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	749
ಸದಸ್ಯರ ಹೆಸರು	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	26.07.2019
ಉತ್ತರಿಸುವ ಸಚಿವರು	ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.
ಪ್ರಶ್ನೆಗಳು	**ಉತ್ತರಗಳು**
ಅ) ಮಾಹಿತಿ ತಂತ್ರಜ್ಞಾನವು ಬೆಂಗಳೂರಿನಲ್ಲಿಯೇ ಕೇಂದ್ರೀಕೃತವಾಗಿದ್ದು, ಇದರಿಂದ ಜನದಟ್ಟಣೆ ಹೆಚ್ಚಾಗಿದ್ದು ನೀರು, ವಿದ್ಯುತ್ ವಾಹನ ದಟ್ಟಣೆ ಹಾಗೂ ಇನ್ನಿತರೆ ಸಮಸ್ಯೆಗಳು ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಹೌದು.
ಆ) ರಾಜ್ಯದ ಉತ್ತರ ಭಾಗದಲ್ಲಿ ಈ ತಂತ್ರಜ್ಞಾನದ ಪಾರ್ಕ್‌ಗಳನ್ನು ಸ್ಥಾಪಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಸರ್ಕಾರದ ನಿಲುವೇನು:	ರಾಜ್ಯದ ಉತ್ತರ ಭಾಗದಲ್ಲಿ ಸರ್ಕಾರದ ವತಿಯಿಂದ ಈಗಾಗಲೇ ಧಾರವಾಡ ಜಿಲ್ಲೆಯ ಹುಬ್ಬಳ್ಳಿಯಲ್ಲಿ ಹಾಗೂ ಸರ್ಕಾರದ ಅಧೀನ ಸಂಸ್ಥೆಯಾದ ಕಿಯೋನಿಕ್ಸ್ ವತಿಯಿಂದ ಕಲಬುರ್ಗಿ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದ್ದು, ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ.
ಇ) ಈ ತಂತ್ರಜ್ಞಾನದ ಉದ್ಯೋಗವನ್ನು ರಾಜ್ಯದ ಉತ್ತರ ಭಾಗದ ಉತ್ತೇಜಕವಾದ ಜಿಲ್ಲೆಗಳಿಗೆ ವಿಕೇಂದ್ರಿಕರಿಸುವುದರಿಂದ ಬೆಂಗಳೂರಿಗೆ ಒತ್ತಡ ಕಡಿಮೆಯಾಗುವುದರೊಂದಿಗೆ ರಾಜ್ಯದ ಇತರ ಭಾಗಗಳ ಸಮತೋಲನ ಬೆಳವಣಿಗೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ:	ಈ ಮಾಹಿತಿ ತಂತ್ರಜ್ಞಾನ ಉದ್ಯೋಗವನ್ನು ರಾಜ್ಯದ ಉತ್ತರ ಭಾಗದ ಉತ್ತೇಜಕವಾದ ಜಿಲ್ಲೆಗಳಿಗೆ ವಿಕೇಂದ್ರಿಕರಿಸುವುದರಿಂದ ಬೆಂಗಳೂರಿಗೆ ಒತ್ತಡ ಕಡಿಮೆಯಾಗುವುದರೊಂದಿಗೆ ರಾಜ್ಯದ ಇತರ ಭಾಗಗಳ ಸಮತೋಲನ ಬೆಳವಣಿಗೆಗಾಗಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:- 1) ಈಗಾಗಲೇ ಹುಬ್ಬಳ್ಳಿಯಲ್ಲಿ ಹಾಗೂ ಕಲಬುರ್ಗಿಯಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್ ಗಳನ್ನು ಸ್ಥಾಪಿಸಲಾಗಿದೆ. 2) ಕಿಯೋನಿಕ್ಸ್ ವತಿಯಿಂದ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಹಾಗೂ ಉದ್ದಿಮೆದಾರರನ್ನಾಗಿ ಮಾಡಲು ವಿವಿಧ ರೀತಿಯ ಕಂಪ್ಯೂಟರ್ ತರಬೇತಿಯನ್ನು ನೀಡಲಾಗುತ್ತಿದೆ. 3) ಉತ್ತರ ಕರ್ನಾಟಕದ ಧಾರವಾಡ, ಬೆಳಗಾವಿ, ಕಲಬುರ್ಗಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಸ್ವಂತ ಉದ್ಯಮಶೀಲತೆ ಆರಂಭಿಸಲು ಸದರಿ ಜಿಲ್ಲೆಗಳ ಆಯ್ದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ನ್ಯೂ ಏಜ್ ಇನ್‌ಕುಬೇಷನ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. 4) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಟ್ರೇನ್ ದಿ ಟ್ರೇನರ್ ಹಾಗೂ ಕೆಪ್ಯಾಸಿಟಿ ಬಿಲ್ಡಿಂಗ್ ಕಾರ್ಯಕ್ರಮಗಳನ್ನು ಕಲಬುರ್ಗಿ, ರಾಯಚೂರು, ಬಳ್ಳಾರಿ ಮತ್ತು ಬೀದರ್ ಜಿಲ್ಲೆಗಳಲ್ಲಿ ನಡೆಸಲಾಗುತ್ತಿದೆ. 5) ಇದಲ್ಲದೆ, ಮಾಹಿತಿ ತಂತ್ರಜ್ಞಾನ ಉದ್ದಿಮೆಗಳನ್ನು ಸ್ಥಾಪಿಸುವ

	ಉದ್ದಿಮೆದಾರರಿಗೆ, ಸರ್ಕಾರವು ಘೋಷಿಸಿರುವ i4 ನೀತಿಯಲ್ಲಿ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗಿದೆ:- ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೊರವಲಯದಲ್ಲಿ ಉದ್ಯೋಗ ಉತ್ತೇಜನಾಧಾರಿತ ಭೂ ಹಂಚಿಕೆ. ಆ) Startup ಕಂಪನಿಗಳನ್ನು ಪ್ರಾರಂಭಿಸಲು ಅವಕಾಶಗಳು. ಇ) ಏಕ ಗವಾಕ್ಷಿಯಾಗಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ. ಈ) ಕರ್ನಾಟಕ ಕೈಗಾರಿಕಾ ಉದ್ಯೋಗ, ಆದೇಶ ನಿಯಮ (Standing orders) 1946ರನ್ವಯ IT/ITEs/Knowledge/Startups ಕೈಗಾರಿಕೆಗಳಿಗೆ ವಿನಾಯ್ತಿ. ಉ) IT/ITEs/Startups/Animation/Gaming/Computer Graphics/Telecom/BPO/KPO ಹಾಗೂ ಇತರೆ ಜ್ಞಾನಾಧಾರಿತ ಉದ್ದಿಮೆಗಳನ್ನು ಅವಶ್ಯಕ ಸೇವೆಗಳಿಗಾಗಿ ಪರಿಗಣನೆ. ಊ) ಪಿ.ಎಫ್ ಹಾಗೂ ಇ.ಎಸ್.ಐ. ವಂತಿಗೆಯ ಹಿಂಪಾವತಿ. ಋ) ವಿದ್ಯುತ್‌ಚ್ಛಕ್ತಿ ದರದಲ್ಲಿ ರಿಯಾಯಿತಿ. ಎ) ಸ್ಟ್ಯಾಂಪ್ ಶುಲ್ಕದಲ್ಲಿ ವಿನಾಯಿತಿ.
ಈ) ಇಂತಹ ವಿಕೇಂದ್ರಿಕರಣದಿಂದ ರಾಜ್ಯದ ಹಿಂದುಳಿದ ಭಾಗವನ್ನು ಅಭಿವೃದ್ಧಿಪಡಿಸುವುದರೊಂದಿಗೆ ಸ್ಥಳೀಯ ಜನರಿಗೆ ಉದ್ಯೋಗದ ಅವಕಾಶ ದೊರಕಿಸುವುದ ರೊಂದಿಗೆ ಜನರ ಆರ್ಥಿಕ ಮಟ್ಟವನ್ನು ಸುಧಾರಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ:	ಹೌದು.
ಉ) ಹಾಗಿದ್ದಲ್ಲಿ, ಇದರ ರೂಪುರೇಷಗಳ ಬಗ್ಗೆ ಮಾಹಿತಿಯನ್ನು ಒದಗಿಸುವುದು?	ರಾಜ್ಯದ ಹಿಂದುಳಿದ ಭಾಗವನ್ನು ಅಭಿವೃದ್ಧಿಪಡಿಸುವುದರೊಂದಿಗೆ ಸ್ಥಳೀಯ ಜನರಿಗೆ ಉದ್ಯೋಗದ ಅವಕಾಶ ದೊರಕಿಸುವುದರೊಂದಿಗೆ ಜನರ ಆರ್ಥಿಕ ಮಟ್ಟವನ್ನು ಸುಧಾರಿಸುವ ಬಗ್ಗೆ ಸರ್ಕಾರವು ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನದ ಅಭಿವೃದ್ಧಿಗಾಗಿ ಈ ಕೆಳಕಂಡ ನೀತಿಗಳನ್ನು ಜಾರಿಗೆ ತಂದಿದೆ:- 1. 2014 ನೇ ವರ್ಷದಲ್ಲಿ ಐಟಿ, ಐಟಿಇಎಸ್, ಇನ್ನೋವೇಷನ್ ಇನ್ಸೆಂಟಿವ್ಸ್ (ಐ4) ನೀತಿ, 2. 2015 ನೇ ವರ್ಷದಲ್ಲಿ ಕರ್ನಾಟಕ ಸ್ಟಾರ್ಟ್‌ಅಪ್ ನೀತಿ 3. 2017 ನೇ ವರ್ಷದಲ್ಲಿ ಕರ್ನಾಟಕ ಎಲೆಕ್ಟ್ರಾನಿಕ್ಸ್ ಸಿಸ್ಟಮ್ ಡಿಸೈನ್ ಮತ್ತು ಮ್ಯಾನುಫ್ಯಾಕ್ಚರಿಂಗ್ ನೀತಿ 4. 2017 ನೇ ವರ್ಷದಲ್ಲಿ ಕರ್ನಾಟಕ ಅನಿಮೇಷನ್, ವಿಷ್ಯುವಲ್ ಎಫೆಕ್ಟ್ಸ್, ಗೇಮಿಂಗ್ & ಕಾಮಿಕ್ಸ್ ನೀತಿ.

ಸಂಖ್ಯೆ: ಐಟಿಬಿಟಿ 21 ಎಲ್‌ಸಿಎಂ 2019

(ಡಾ|| ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿ ಹಾಗೂ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.